ಶ್ರೀ ಎಸ್. ರಮೇಶ್.—ಗ್ರಾಮಾಂತರ ಪ್ರದೇಶಗಳಲ್ಲಿ ಕೆಲವು ಕಡೆ ಬಸ್ಸುಗಳನ್ನು ವಿತ್‌ಡ್ರಾ ಮಾಡಿಕೊಂಡಿದ್ದೀರಿ. ಜನರು ಕೆಲವು ಬಸ್ಸುಗಳ ಟಾಪ್ ಮೇಲೆ ಕುಳಿತುಕೊಂಡು ಪ್ರಯಾಣ ಮಾಡುತ್ತಿರುವುದನ್ನು ನೋಡಿದ್ದೇವೆ.

ಶ್ರೀ ಕೆ. ಜೆ. ಜಾರ್ಜ್.—ಮಾನ್ಯ ರಮೇಶ್‌ರವರು ಜನರಲ್ಲಾಗಿ ಹೇಳುತ್ತಿದ್ದಾರೆ.

ಶ್ರೀ ಎಸ್. ರಮೇಶ್.—ರೆಗ್ಯೂಲರ್ ರೂಟ್‌ಗಳಲ್ಲಿಯೇ ಬಸ್‌ಗಳನ್ನು ವಾಪಸ್ಸು ತೆಗೆದುಕೊಂಡಿದ್ದಾರೆ.

ಶ್ರೀ ಕೆ. ಜೆ. ಜಾರ್ಜ್.—ಆ ರೀತಿ ತೆಗೆದುಕೊಂಡಿಲ್ಲ.

ಅಧ್ಯಕ್ಷರು.—ಇನ್ನೂ ಎರಡು ನಿಮಿಷ ಇದೆ. ಈಗ ಗೈರು ಹಾಜರಾದ ಸದಸ್ಯರನ್ನು ಮತ್ತೆ ಕರೆಯುತ್ತೇನೆ. ಶ್ರೀ ಎ. ಕೃಷ್ಣಪ್ಪ, ಶ್ರೀ ಯಡಿಯೂರಪ್ಪ ಸದಸ್ಯರು ಹಾಜರಿಲ್ಲ ಪ್ರಶ್ನೋತ್ತರ ವೇಳೆ ಮುಗಿಯಿತು.

ದಿನದ ಪಟ್ಟಿಯಲ್ಲಿ ಸೇರಿಸಲಾದ ಪ್ರಶ್ನೋತ್ತರಗಳು

ಬೆಳ್ಳಂದೂರು ಕೆರೆ ಏತ ನೀರಾವರಿ ಯೋಜನೆ

೭೨. ಶ್ರೀ ಎ. ಕೃಷ್ಣಪ್ಪ (ವರ್ತೂರು).—ಮಾನ್ಯ ಲೋಕೋಪಯೋಗಿ ಹಾಗೂ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ದಕ್ಷಿಣ ತಾಲ್ಲೂಕು ವರ್ತೂರು ಹೋಬಳಿಯ ಬೆಳ್ಳಂದೂರು ಕೆರೆಯ ಏತ ನೀರಾವರಿ ಯೋಜನೆ ಪೂರ್ಣಗೊಂಡಿದೆಯೇ.

ಆ) ಹಾಗಿದ್ದಲ್ಲಿ, ಆದು ಈಗ ಯಾವ ಹಂತದಲ್ಲಿದೆ ಮತ್ತು ವಿಳಂಬಕ್ಕೆ ಕಾರಣಗಳೇನು.

ಇ) ಈ ಯೋಜನೆಯನ್ನು ಎಷ್ಟು ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ನೀರಾವರಿ ಮತ್ತು ಲೋಕೋಪಯೋಗಿ ಮಂತ್ರಿಗಳು).—

ಅ) ಬೆಂಗಳೂರು ದಕ್ಷಿಣ ತಾಲ್ಲೂಕು ವರ್ತೂರು ಹೋಬಳಿಯ ಬೆಳ್ಳಂದೂರು ಕೆರೆಗೆ ಸಂಬಂಧಿಸಿದಂತೆ ಮೂರು ಏತ ನೀರಾವರಿ ಯೋಜನೆಗಳಿದ್ದು, ಈ ಪೈಕಿ ಹರಳೂರು ಏತ ನೀರಾವರಿ ಯೋಜನೆ ಕಾಮಗಾರಿ ೧೯೮೫ರಲ್ಲಿ ಪೂರ್ಣಗೊಂಡಿದೆ. ದೊಡ್ಡಕಾನಹಳ್ಳಿ ಏತ ನೀರಾವರಿ ಯೋಜನೆ ಕಾಮಗಾರಿ ಪ್ರಗತಿಯ ಹಂತದಲ್ಲಿದೆ. ಗುಂಜೂರು ಬಳಿಯ ಏತ ನೀರಾವರಿ ಯೋಜನೆ ಇನ್ನೂ ಪೂರ್ಣಗೊಂಡಿಲ್ಲ.

ಆ) ಮತ್ತು ಇ) ದೊಡ್ಡಕಾನಹಳ್ಳಿ ಏತ ನೀರಾವರಿ ಯೋಜನೆಯನ್ನು ೧೯೯೦-೯೧ನೇ ಸಾಲಿನಲ್ಲಿ ಪೂರ್ಣಗೊಳಿಸಲು ಉದ್ದೇಶಿಸಿದೆ. ಗುಂಜೂರು ಬಳಿ ಏತ ನೀರಾವರಿ ಯೋಜನೆಗೆ ಸಂಬಂಧಿಸಿದ ಬೆಳ್ಳಂದೂರು ಕೆರೆಯ ಉನ್ನತ ಮಟ್ಟದ ಕಾಲುವೆಯು ಬೆಂಗಳೂರು-ಸೇಲಂ ರೈಲ್ವೆ ಮಾರ್ಗವನ್ನು ದಾಟಿ ಹೋಗಲು ರೈಲ್ವೆ ಇಲಾಖೆಯಿಂದ ಅನುಮತಿ ಕೇಳಲಾಗಿದ್ದು ಅನುಮತಿ ದೊರೆತ ನಂತರ ಉಳಿದ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

ಚುಕ್ಕೆ ರಹಿತ ಪ್ರಶ್ನೆಗಳಿಗೆ ನೀಡಲಾದ ಲಿಖಿತ ಉತ್ತರಗಳು

ಶ್ರೀ ಜಿ. ಪುಟ್ಟಸ್ವಾಮಿಗೌಡ.—ಲಿಖಿತ ಮೂಲಕ ಉತ್ತರಿಸುವ ೧೪ ಪ್ರಶ್ನೆಗಳಿಗೆ ಉತ್ತರವನ್ನು ಸಭೆಯ ಮುಂದಿಡುತ್ತೇನೆ.

ಮಂಡ್ಯ ಜಿಲ್ಲೆಯಲ್ಲಿ ಪ್ರವಾಸಿಗರಿಗೆ ಸೌಲಭ್ಯ

೫೦. ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ).—ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಇಲಾಖೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು "ಪ್ರವಾಸಿಗರ ಅನುಕೂಲಕ್ಕಾಗಿ" ಮಂಡ್ಯ ಜಿಲ್ಲೆಯಲ್ಲಿ ಕೈಗೊಂಡಿರುವ ತಾತ್ಕಾಲಿಕ ಹಾಗೂ ಶಾಶ್ವತ ಕಾರ್ಯಕ್ರಮಗಳೇನು ?

ಆ) ಬೆಂಗಳೂರು–ಮಂಗಳೂರು ರಾಜ್ಯ ಹೆದ್ದಾರಿಯಲ್ಲಿ ಬೆಳ್ಳೂರು ಸಮೀಪ ಹೋಟೆಲ್ ನಿರ್ಮಿಸುವ ಪ್ರಸ್ತಾಪವು ಸರ್ಕಾರದ ಮುಂದಿದೆಯೇ ?

ಇ) ಜಪಾನ್ ನೆರವಿನಿಂದ ಕೈಗೊಳ್ಳಲಿರುವ ವ್ಯಾಪಕ ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಮಂಡ್ಯ ಜಿಲ್ಲೆಯಲ್ಲಿ ಕೈಗೊಳ್ಳಲಿರುವ ಕಾರ್ಯಕ್ರಮಗಳೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಇಲಾಖೆ).—

ಅ) ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ಪ್ರವಾಸಿಗರ ಸೌಲಭ್ಯಕ್ಕಾಗಿ ಈ ಕೆಳಕಂಡ ಕಾರ್ಯಕ್ರಮ ಸೌಲಭ್ಯಗಳನ್ನು ಒದಗಿಸಲಾಗಿದೆ.

೧ ಶ್ರೀರಂಗಪಟ್ಟಣದಲ್ಲಿ ನದಿ ತೀರದ ಕುಟೀರಗಳು

೨ ಕೃಷ್ಣರಾಜಸಾಗರದಲ್ಲಿ ದೋಣಿ ವಿಹಾರ.

೩ ಶ್ರೀರಂಗಪಟ್ಟಣದಲ್ಲಿ ಶ್ರೀರಂಗನಾಥಸ್ವಾಮಿ ದೇವಾಲಯದ ಹತ್ತಿರ ಉಪಹಾರಗೃಹ.

೪ ಕೃಷ್ಣರಾಜಸಾಗರದಲ್ಲಿ ವಸತಿ ಗೃಹ.

೫ ಮದ್ದೂರಿನಲ್ಲಿ ಹೆದ್ದಾರಿ ಸೌಲಭ್ಯ.

೬ ರಂಗನತಿಟ್ಟು ಪಕ್ಷಿಧಾಮದಲ್ಲಿ ಕೇಂದ್ರ ಸರ್ಕಾರದ ಧನ ಸಹಾಯದಿಂದ ೨ ದೋಣಿಗಳ ಸೌಲಭ್ಯ

ಮೇಲ್ಕಂಡ ಪ್ರವಾಸದ ಸೌಲಭ್ಯಗಳಲ್ಲದೆ ಬೆಂಗಳೂರಿನಿಂದ ಪ್ರತಿನಿತ್ಯ ವ್ಯವಸ್ಥಿತ ಪ್ರವಾಸದ ವಾಹನವು ಶ್ರೀರಂಗಪಟ್ಟಣ ಮತ್ತು ಕೃಷ್ಣರಾಜ ಸಾಗರವನ್ನು ಪ್ರವಾಸಿಗರಿಗೆ ಸಂದರ್ಶನ ಮಾಡಲು ವ್ಯವಸ್ಥೆ ಮಾಡಲಾಗಿದೆ.

ಆ) ಕೇಂದ್ರ ಸರ್ಕಾರದ ಧನಸಹಾಯದಿಂದ ಈ ಸ್ಥಳದಲ್ಲಿ ಹೆದ್ದಾರಿ ಸೌಲಭ್ಯ ಒದಗಿಸಲು ಸರ್ಕಾರವು ಪರಿಶೀಲಿಸಲಾಗುತ್ತಿದೆ.

ಇ) ಜಪಾನ್ ಸರ್ಕಾರದಿಂದ ಒ.ಇ.ಸಿ.ಎಫ್. ಸಂಸ್ಥೆಯ ಮೂಲಕ ಒದಗಲಿರುವ ಹಣಕಾಸಿನ ನೆರವಿನ ಬಗ್ಗೆ ಹಾಗೂ ನಿಯೋಜಿಸಿರುವ ಕಾರ್ಯಕ್ರಮಗಳ ಬಗ್ಗೆ ಇನ್ನೂ ಅಂತಿಮ ನಿರ್ಧಾರವಾಗಿರುವುದಿಲ್ಲ.

ಅಫಜಲಪುರ ಕ್ಷೇತ್ರದಲ್ಲಿ ಏತ ನೀರಾವರಿ ಯೋಜನೆ

೫೨. ಮಾಲೀಕಯ್ಯ ವಿ. ಗುತ್ತೇದಾರ (ಅಫಜಲ್‌ಪುರ).— ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಅಫಜಲಪುರ ತಾಲ್ಲೂಕಿಗೆ ಮಂಜೂರು ಮಾಡಲಾದ ಏತ ನೀರಾವರಿ ಯೋಜನೆಗಳ ಸಂಖ್ಯೆ ಎಷ್ಟು ;

ಆ) ಇವುಗಳನ್ನು ಯಾವ ಇಸವಿಯಲ್ಲಿ ಮಂಜೂರು ಮಾಡಲಾಗಿದೆ ;

ಇ) ಹಾಗೂ ಇವುಗಳಲ್ಲಿ ಎಷ್ಟು ಕಾರ್ಯ ನಿರ್ವಹಿಸುತ್ತಿವೆ ;

ಈ) ಈ ಎಲ್ಲಾ ಏತ ನೀರಾವರಿ ಯೋಜನೆಗಳಿಗೆ ಸರ್ಕಾರವು ಇದುವರೆಗೆ ಮಾಡಿದ ವೆಚ್ಚವೆಷ್ಟು ಮತ್ತು ಇವುಗಳು ಇನ್ನೂ ಪೂರ್ಣಗೊಳ್ಳದಿರಲು ಕಾರಣಗಳೇನು ;

ಉ) ಈಗ ಎಷ್ಟು ಎಕರೆ ಜಮೀನಿಗೆ ನೀರಾವರಿ ಅನುಕೂಲವಾಗಿದೆ ಹಾಗೂ ಈ ಎಲ್ಲಾ ಯೋಜನೆಗಳನ್ನು ಕಾರ್ಯರೂಪಕ್ಕೆ ತಂದಲ್ಲಿ ಎಷ್ಟು ಎಕರೆ ಜಮೀನಿಗೆ ನೀರಾವರಿ ಅನುಕೂಲವಾಗುವುದು ?